Akashvani : Bangalore
Regional Bulletin In Kannada
03.09.2024 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

- ದೇಶದ ಎಲ್ಲಾ ರೈಲ್ವೆ ನಿಲ್ದಾಣಗಳ ಅಭಿವೃದ್ಧಿಗೆ ಕ್ರಮ - ಕೇಂದ್ರ ಸಚಿವ ವಿ. ಸೋಮಣ್ಣ

- ಹದಿನೈದು ಜಿಲ್ಲೆಗಳಲ್ಲಿ ಮಾದರಿ ಕಾಲೇಜು ಆರಂಭಕ್ಕೆ ಸರ್ಕಾರದ ತೀರ್ಮಾನ

- ಕಾರ್ಖಾನೆಗಳ ಸಕ್ಕರೆ ದಾಸ್ತಾನು ಮಾರಾಟಕ್ಕೆ ಕೇಂದ್ರ ಅನುಮತಿ

- ಮಳೆ-ಪ್ರವಾಹದಿಂದ ತೊಂದರೆಗೆ ಒಳಗಾದ ಉತ್ತರ ಕರ್ನಾಟಕ ಭಾಗದ ಜನತೆಗೆ ಪರಿಹಾರ ನೀಡಲು ಬಿಜೆಪಿ ಆಗ್ರಹ

**<><*<><>*><>**

ವಿಮಾನ ನಿಲ್ದಾಣದ ಮಾದರಿಯಂತೆ ದೇಶದಲ್ಲಿನ ಎಲ್ಲಾ ರೈಲ್ವೆ ನಿಲ್ದಾಣಗಳನ್ನು ಅಭಿವೃದ್ಧಿಪಡಿಸಿ ಮೂಲಸೌಲಭ್ಯ ಒದಗಿಸಲಾಗುವುದು ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಹೇಳಿದ್ದಾರೆ. ರಾಯಚೂರು ಜಿಲ್ಲೆಯ ಜಾಲಾಪುರ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ ಅವರು ಮಾತನಾಡಿದರು. ತುಮಕೂರು ಜನತೆಯ ಬಹುದಿನಗಳ ಬೇಡಿಕೆಯಾಗಿದ್ದ ತುಮಕೂರು-ಯಶವಂತಪುರ ಮಾರ್ಗವಾಗಿ ಸಂಚರಿಸುವ ಮೆಮು ರೈಲು ಸಂಚಾರಕ್ಕೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ತುಮಕೂರು-ಯಶವಂತಪುರ ಮೆಮು ರೈಲು ಬೆಳಗ್ಗೆ ೮.೫೫ಕ್ಕೆ ತುಮಕೂರಿನಿಂದ ಹೊರಟು ೧೦.೨೫ಕ್ಕೆ ಯಶವಂತಪುರ ತಲುಪಲಿದೆ. ಯಶವಂತಪುರದಿಂದ ಸಂಜೆ ೫.೪೦ಕ್ಕೆ ಹೊರಟು, ರಾತ್ರಿ ೭ ಗಂಟೆ ೫ ನಿಮಿಷಕ್ಕೆ ತುಮಕೂರು ತಲುಪಲಿದೆ. ಭಾನುವಾರ ಹೊರತುಪಡಿಸಿ ವಾರದ ೬ ದಿನಗಳಲ್ಲಿ ತುಮಕೂರು-ಯಶವಂತಪುರ ರೈಲು ಸಂಚರಿಸಲಿದೆ ಎಂದು ಅವರು ಹೇಳಿದರು. ಈ ಬಾರಿಯ ರೈಲ್ವೆ ಬಜೆಟ್‌ನಲ್ಲಿ ರಾಜ್ಯಕ್ಕೆ ೨ ಸಾವಿರದ ೫೦೦ ಕೋಟಿ ರೂಪಾಯಿ ಅನುದಾನ ನೀಡಲಾಗಿದೆ. ಹಿಂದುಳಿದ ತಾಲೂಕು ಹಾಗೂ ಗ್ರಾಮೀಣ ಪ್ರದೇಶದ ಜನರ ಜೀವನ ಮಟ್ಟ ಸುಧಾರಿಸಲು ರಾಯಚೂರು ಜಿಲ್ಲೆಯ ಸಿರವಾರ - ಮಸ್ಕಿ ತಾಲೂಕು ಆಯ್ಕೆ ಮಾಡಿಕೊಂಡು ೨೫ ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಲಾಗಿದೆ ಎಂದರು. ರಾಯಚೂರು ಜಿಲ್ಲೆಯ ಎಲ್ಲಾ ರೈಲ್ವೆ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಇವುಗಳನ್ನು ಸಾಧ್ಯವಾದಷ್ಟು ಬೇಗ ಪೂರ್ಣಗೊಳಿಸಲಾಗುವುದು ಎಂದು ಕೇಂದ್ರ ಸಚಿವರು ತಿಳಿಸಿದರು.

**<><*<><>*><>**

ಅಲ್ಪ ಸಂಖ್ಯಾತ ಸಮುದಾಯದ ವಿದ್ಯಾರ್ಥಿನಿಯರ ಉನ್ನತ ವ್ಯಾಸಂಗಕ್ಕಾಗಿ ೬೦ ಕೋಟಿ ರೂಪಾಯಿ ವೆಚ್ಚದಲ್ಲಿ ಮಾದರಿ ಕಾಲೇಜು ಆರಂಭಿಸಲಾಗುವುದು ಎಂದು ವಸತಿ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಖಾತೆ ಸಚಿವ ಜಮೀರ್ ಅಹಮ್ಮದ್ ಖಾನ್ ಹೇಳಿದ್ದಾರೆ. ಹಾವೇರಿಯಲ್ಲಿಂದು ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಾಜ್ಯದ ೧೫ ಜಿಲ್ಲೆಗಳಲ್ಲಿ ೬೦ ಕೋಟಿ ರೂಪಾಯಿ ವೆಚ್ಚದಲ್ಲಿ ಮಾದರಿ ಕಾಲೇಜು ಆರಂಭಿಸಲಾಗುವುದು. ವಕ್ಫ್ ಆಸ್ತಿಗಳ ಒತ್ತುವರಿ ತೆರವುಗೊಳಿಸಲು ಮತ್ತು ಆಸ್ತಿಯನ್ನು ಕಾಪಾಡಲು ರಾಜ್ಯಾದ್ಯಂತ ವಕ್ಫ್ ಅದಾಲತ್ ಆಯೋಜಿಸಲಾಗುತ್ತಿದೆ ಎಂದರು. ಅಧಿಕಾರಿಗಳು ಒತ್ತುವರಿ ಪ್ರಕರಣಗಳನ್ನು ಪಟ್ಟಿ ಮಾಡಿ ಅದನ್ನು ತೆರವುಗೊಳಿಸಲು ಹೆಚ್ಚಿನ ಗಮನ ಹರಿಸಬೇಕು ಎಂದು ಸಚಿವರು ಸೂಚಿಸಿದರು.

<><*<><>*><>

ಮಲೆಮಹದೇಶ್ವರ ಬೆಟ್ಟ, ಯಲ್ಲಮ್ಮ ದೇವಸ್ಥಾನ ಪ್ರಾಧಿಕಾರಗಳಂತೆ ಮೈಸೂರಿಗೆ ಬರುವ ಯಾತ್ರಿಕರಿಗೆ ಸೌಲಭ್ಯ ಕಲ್ಪಿಸಲು ಚಾಮುಂಡಿ ಬೆಟ್ಟ ಅಭಿವೃದ್ಧಿ ಪ್ರಾಧಿಕಾರ ಸ್ಥಾಪಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬರುವ ಯಾತ್ರಿಕರಿಗೆ ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ ಕಲ್ಪಿಸಲು ಹೆಚ್ಚಿನ ಆದ್ಯತೆ ನೀಡಲಾಗಿದೆ. ಚಾಮುಂಡಿ ಬೆಟ್ಟ ಪ್ರಾಧಿಕಾರ ವ್ಯಾಪ್ತಿ ಮೂಲಕ ೨೩ ದೇವಾಲಯಗಳನ್ನು ಅಭಿವೃದ್ಧಿಪಡಿಸಲಾಗುವುದು. ಕೇಂದ್ರ ಸರ್ಕಾರದ ಪ್ರಸಾದ್ ಯೋಜನೆಯಲ್ಲಿ ವಿವಿಧ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಎಂದರು. ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿನ ಕೋವಿಡ್ ಹಗರಣದ ತನಿಖಾ ವರದಿಯನ್ನು ಸಂಪುಟ ಸಭೆಯಲ್ಲಿ ಚರ್ಚಿಸಲಾಗುವುದು ಎಂದರು.

<><*<><>*><>

ರಾಜ್ಯದ ಸಕ್ಕರೆ ಕಾರ್ಖಾನೆಗಳು ಕಬ್ಬು ಬೆಳೆಗಾರರಿಗೆ ಈಗಾಗಲೇ ೨೦ ಸಾವಿರ ಕೋಟಿ ರೂಪಾಯಿ ಹಣ ಪಾವತಿಸಿದೆ ಎಂದು ಸಕ್ಕರೆ ಸಚಿವ ಶಿವಾನಂದ ಪಾಟೀಲ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಸಕ್ಕರೆ ಕಾರ್ಖಾನೆಗಳ ಮೇಲೆ ದಾಸ್ತಾನು ಮಾರಾಟಕ್ಕೆ ಕೇಂದ್ರ ಅನುಮತಿ ನೀಡಿದೆ ಎಂದರು. ಬಾಕಿ ಹಣದ ಪೈಕಿ ಈಗಾಗಲೇ ಶೇಕಡ ೯೯ ರಷ್ಟು ಹಣ ಪಾವತಿಸಲಾಗಿದೆ ಎಂದು ಅವರು ಹೇಳಿದರು. ತೂಕದಲ್ಲಿ ರೈತರಿಗೆ ಮೋಸ - ವಂಚನೆಯಾಗದಂತೆ ಆಧುನಿಕ ಯಂತ್ರಗಳನ್ನು ಅಳವಡಿಸಲಾಗುವುದು. ನಷ್ಟದಲ್ಲಿರುವ ಸರ್ಕಾರಿ ಸಕ್ಕರೆ ಕಾರ್ಖಾನೆಗಳನ್ನು ಗುತ್ತಿಗೆ ನೀಡಿದ್ದು, ಇದರಿಂದ ಅವು ಲಾಭದಲ್ಲಿ ನಡೆಯುತ್ತಿದೆ ಎಂದು ಸಚಿವರು ಸ್ಪಷ್ಟಪಡಿಸಿದರು.

**ಧ್ವನಿ: ಸಚಿವ ಶಿವಾನಂದ ಪಾಟೀಲ್**

<><*<><>*><>

ಫ್ಲಿಕ್ಸ್ ಬಸ್ ಸೇವೆ ದಕ್ಷಿಣ ಭಾರತದಲ್ಲಿ ಜನರ ಪ್ರಯಾಣದ ಅನುಭವವನ್ನು ಹೊಸ ಎತ್ತರಕ್ಕೆ ತೆಗೆದುಕೊಂಡು ಹೋಗಲಿದೆ ಎಂದು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಈ ಮಾಹಿತಿ ನೀಡಿದ ಅವರು, ಖಾಸಗಿ ಬಸ್ ನಿರ್ವಾಹಕರ ಸಹಯೋಗದಲ್ಲಿ ಸಂಚಾರ ಜಾಲ ವಿಸ್ತರಿಸಿಕೊಳ್ಳುವ ಯೋಜನೆಯನ್ನು ಫ್ಲಿಕ್ಸ್ ಬಸ್ ಹೊಂದಿದೆ. ಹೆಚ್ಚಿನ ಅನುಕೂಲ ಹೊರೆಯಾಗದ ದರಗಳ ಮೂಲಕ ಪ್ರಯಾಣಿಕರ ವಿಶ್ವಾಸಗಳಿಸುವ ಗುರಿ ಹೊಂದಿದೆ ಎಂದರು.

ಸಂಚಾರದಲ್ಲಿ ಭಾರತ ಜಗತ್ತಿನ ೩ನೇ ರಾಷ್ಟ್ರವಾಗಿದ್ದು, ಪರಿಸರ ಸ್ನೇಹಿ ಇಂಧನಗಳ ಬಳಕೆಗೆ ಒತ್ತು ನೀಡಲು ಆದ್ಯತೆ ನೀಡಲಾಗುತ್ತಿದೆ ಎಂದು ಸಚಿವರು ಹೇಳಿದರು.

<><*<><>*><>

ಮಳೆ ಮತ್ತು ಪ್ರವಾಹದಿಂದ ತೊಂದರೆಗೆ ಒಳಗಾದ ಉತ್ತರ ಕರ್ನಾಟಕ ಜನರಿಗೆ ಕೂಡಲೇ ಪರಿಹಾರ ನೀಡಬೇಕು ಎಂದು ವಿಧಾನಸಭೆಯ ವಿರೋಧಪಕ್ಷದ ನಾಯಕ ಆರ್. ಅಶೋಕ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಳೆಯಿಂದಾಗಿ ರಾಜ್ಯದ ಬಹುತೇಕ ರಸ್ತೆಗಳು ಹದಗೆಟ್ಟಿದ್ದು, ಜನರು ನಿತ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ ಎಂದರು. ರಾಜ್ಯದಲ್ಲಿ ಹೊಸ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಡ್ರಗ್ ಜಾಲ ತಲೆ ಎತ್ತಿದ್ದು, ಯುವಕರು ದುಶ್ಚಟಗಳಿಗೆ ದಾಸರಾಗುತ್ತಿದ್ದಾರೆ ಎಂದು ಅಶೋಕ ಆರೋಪಿಸಿದರು.

<><*<><>*><>

ಮೇಕೆದಾಟು ಯೋಜನೆಯಿಂದ ತಮಿಳುನಾಡಿಗೆ ಹೆಚ್ಚು ಉಪಯೋಗ ಎಂದು ಜಲಸಂಪನ್ಮೂಲ ಸಚಿವ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ಚೆನ್ನೈನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಹೆಚ್ಚಿನ ಮಳೆಯಾದರೆ ಅದರ ಪ್ರಯೋಜನ ತಮಿಳುನಾಡಿಗೆ ದೊರಕುತ್ತವೆ ಎಂದರು. ಅನೇಕ ಕಡೆ ಘನತ್ಯಾಜ್ಯದಿಂದ ವಿದ್ಯುತ್ ತಯಾರಿಸಲಾಗುತ್ತಿದೆಯಾದರೂ ಇದರಲ್ಲಿ ಪರಿಪೂರ್ಣ ಯಶಸ್ಸು ಲಭ್ಯವಾಗಿಲ್ಲ ಎಂದು ಉಪಮುಖ್ಯಮಂತ್ರಿ ಹೇಳಿದರು.

<><*<><>*><>

ಸುಳ್ಳು ಸುದ್ದಿ ಸಮಾಜಕ್ಕೆ ಮಾರಕವಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಕರ್ನಾಟಕ ಮಾಧ್ಯಮ ಅಕಾಡೆಮಿ ಮತ್ತು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಏರ್ಪಡಿಸಿದ್ದ ವಿಚಾರ ಸಂಕಿರಣ ಉದ್ಘಾಟಿಸಿ ಅವರು ಮಾತನಾಡಿದರು. ಸುಳ್ಳು ಸುದ್ದಿಗಳು ಸಮಾಜಕ್ಕೆ ಕೆಟ್ಟ ಸಂದೇಶಗಳನ್ನು ನೀಡುತ್ತದೆ. ಜನರಿಗೆ ಯಾವುದು ಸತ್ಯ, ಯಾವುದು ಮಿಥ್ಯ ಎಂಬ ಸಂಶಯ ಉಂಟಾಗುತ್ತದೆ. ಆದ್ದರಿಂದ ಮಾಧ್ಯಮದಲ್ಲಿ ಕೆಲಸ ಮಾಡುವವರು ನಂಬಿಕೆ ಮತ್ತು ವಿಶ್ವಾಸರ್ಹ ಸುದ್ದಿಗಳನ್ನು ಮಾತ್ರ ಬಿತ್ತರಿಸಬೇಕು ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

<><*<><>*><>

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಇದೇ ೧೫ರಂದು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಆಚರಿಸಲಾಗುವುದು ಎಂದು ಶಿಕ್ಷಣ ಸಚಿವ ಮಧುಬಂಗಾರಪ್ಪ ಹೇಳಿದ್ದಾರೆ. ಶಿವಮೊಗ್ಗದ ಕುವೆಂಪು ವಿಶ್ವವಿದ್ಯಾಲಯದಲ್ಲಿ ಏರ್ಪಡಿಸಲಾಗಿದ್ದ ಸಭೆಯಲ್ಲಿ ಅವರು ಮಾತನಾಡಿದರು. ದಿನಾಚರಣೆ ಕಾರ್ಯಕ್ರಮದಲ್ಲಿ ಅಧಿಕಾರಿಗಳು ಸ್ಥಳೀಯ ಸಂಸ್ಥೆ ಜನಪ್ರತಿನಿಧಿಗಳು, ಸಾರ್ವಜನಿಕರು, ವಿದ್ಯಾರ್ಥಿಗಳು ಭಾಗಿಯಾಗಲಿದ್ದಾರೆ ಎಂದರು. ಮಾನವ ಸರಪಳಿ ನಿರ್ಮಿಸಲು ಉದ್ದೇಶಿಸಿದ್ದು, ಇದರಲ್ಲಿ ೫೦ ಸಾವಿರ ಜನರನ್ನು ತೊಡಗಿಸಲಾಗುವುದು ಎಂದು ಅವರು ಹೇಳಿದರು. ಸಭೆಯಲ್ಲಿ ಜಿಲ್ಲಾ ಪೊಲೀಸ್

ವರಿಷ್ಠಾಧಿಕಾರಿ ಮಿಥುನ್ ಕುಮಾರ್, ಕುವೆಂಪು ವಿಶ್ವವಿದ್ಯಾಲಯದ ಕುಲಪತಿ ಶರತ್ ಅನಂತಮೂರ್ತಿ, ಸಮಾಜ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಭಾಗಿಯಾಗಿದ್ದರು.

<><*<><>*><>

ಧಾರವಾಡ ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ ೯ ಕೋಟಿ ರೂಪಾಯಿ ವೆಚ್ಚದ ತಾರಾಲಯ ಕಾಮಗಾರಿಯನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಬೇಕೆಂದು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್. ಬೋಸರಾಜು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ವಿಜ್ಞಾನ ಕೇಂದ್ರಕ್ಕೆ ಭೇಟಿ ನೀಡಿ, ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡಿದ್ದಾರೆ. ಚಿತ್ರದುರ್ಗ, ವಿಜಯಪುರ, ರಾಮನಗರ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ ಎಲ್ಲ ಜಿಲ್ಲೆಗಳಲ್ಲೂ ವಿಜ್ಞಾನ ಕೇಂದ್ರಗಳ ಸ್ಥಾಪನೆ ಕಾರ್ಯ ಪ್ರಗತಿಯಲ್ಲಿದೆ. ಧಾರವಾಡ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ೨೪ ಎಕರೆ ವಿಶಾಲ ಪ್ರದೇಶದಲ್ಲಿ ಹರಡಿದ್ದು, ಇದನ್ನು ಅಂತಾರಾಷ್ಟ್ರೀಯ ಕೇಂದ್ರವನ್ನಾಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಹೇಳಿದರು.

<><*<><>*><>

ಇನ್ನು ಹವಾವರ್ತಮಾನ,

ರಾಜ್ಯದಲ್ಲಿ ಮುಂಗಾರು ಚುರುಕಾಗಿತ್ತು. ಕರಾವಳಿ ಉತ್ತರ ಒಳನಾಡಿನ ಹಲವೆಡೆ ಮಳೆಯಾಗಿದೆ. ಕಮ್ಮರಡಿ, ಆಗುಂಬೆ ೧೦, ಲಿಂಗನಮಕ್ಕಿ ೯, ಕದ್ರಾ ೮, ಸಿದ್ದಾಪುರ ೬, ಗೇರುಸೊಪ್ಪ ೫, ಪುತ್ತೂರು ೪, ಹಾರಂಗಿ, ಕೊಟ್ಟಿಗೆಹಾರದಲ್ಲಿ ತಲಾ ೩ ಸೆಂಟಿ ಮೀಟರ್ ಮಳೆಯಾಗಿದೆ. ಮುನ್ಸೂಚನೆಯಂತೆ ಮುಂದಿನ ಒಂದು ವಾರ ರಾಜ್ಯದ ಹಲವು ಜಿಲ್ಲೆಗಳಲ್ಲಿ ಹಗುರದಿಂದ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಬೆಂಗಳೂರು ಸುತ್ತಮುತ್ತ ಸಾಮಾನ್ಯ ಮೋಡಕವಿದ ವಾತಾವರಣ. ಆಗಾಗ ಹಗುರ ಮಳೆ. ಗರಿಷ್ಠ ೨೮, ಕನಿಷ್ಠ ೨೦ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ವಿಧಾನಸಭಾಧ್ಯಕ್ಷ ಯು.ಟಿ. ಖಾದರ್, ದೆಹಲಿ ಪ್ರವಾಸ ಕೈಗೊಂಡಿದ್ದು, ಇಂದು ಉಪರಾಷ್ಟ್ರಪತಿ ಜಗದೀಪ್ ಧನಕರ್ ಅವರನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಿದ್ದಾರೆ.

೨. ಬೆಂಗಳೂರು ನಗರದಲ್ಲಿ ಕೆಲಸದ ವೇಳೆ ಸಂಚಾರ ಒತ್ತಡ ಕಡಿಮೆಮಾಡಲು ಹೆಚ್ಚಿನ ಮೆಟ್ರೋ ವರ್ತುಲ ರೈಲು ಸೌಲಭ್ಯ ಕಲ್ಪಿಸಬೇಕೆಂದು ಸಂಸದ ತೇಜಸ್ವಿ ಸೂರ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ.

೩. ಚಿತ್ರದುರ್ಗ ಜಿಲ್ಲೆಯಲ್ಲಿ ೪೧ ಬಾಲ್ಯ ವಿವಾಹ ಪ್ರಕರಣಗಳು ವರದಿಯಾಗಿದ್ದು, ಈ ಸಂಬಂಧ ಎಫ್‌ಐಆರ್ ದಾಖಲಿಸಲಾಗಿದೆ. ಮಕ್ಕಳಲ್ಲಿ ಜಾಗೃತಿ ಮೂಡಿಸಲು ಶಾಲಾ ಕಾಲೇಜು ಮತ್ತು ವಿದ್ಯಾರ್ಥಿ ನಿಲಯಗಳಲ್ಲಿ ಜಾಗೃತಿ ಶಿಬಿರ ನಡೆಸಲಾಗುತ್ತಿದೆ ಎಂದು ಚಿತ್ರದುರ್ಗ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಭಾರತಿ ಬಣಕಾರ್ ಹೇಳಿದ್ದಾರೆ.

೪. ಈ ಬಾರಿಯ ಶ್ರೀರಂಗಪಟ್ಟಣ ದಸರಾ ಕಾರ್ಯಕ್ರಮವನ್ನು ಸಾಂಪ್ರದಾಯಿಕ ಮತ್ತು ವಿಜೃಂಭಣೆಯಿಂದ ಆಚರಿಸಬೇಕು ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ್ ತಿಳಿಸಿದ್ದಾರೆ.

೫. ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಸೆಪ್ಟೆಂಬರ್ ೪ ರಂದು ಕೋಲಾರ ಜಿಲ್ಲಾ ಒಳ ಕ್ರೀಡಾಂಗಣದಲ್ಲಿ ಹಿರಿಯ ನಾಗರಿಕರಿಗಾಗಿ ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

೬. ಮುಂಬರುವ ಅಕ್ಟೋಬರ್ ೧ ರಂದು ರಾಮನಗರ ಜಿಲ್ಲೆಯಲ್ಲಿ ವಿಶ್ವ ಹಿರಿಯ ನಾಗರಿಕೆ ದಿನಾಚರಣೆ ಆಚರಿಸಲಾಗುತ್ತಿದೆ. ಇದರ ಅಂಗವಾಗಿ ಸೆಪ್ಟೆಂಬರ್ ೪ ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ಸಾಂಸ್ಕೃತಿಕ ಸ್ಪರ್ಧೆ ಆಯೋಜಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

೭. ಗೌರಿ-ಗಣೇಶ ಹಬ್ಬ ಸಂದರ್ಭದಲ್ಲಿ ಪ್ರಯಾಣಿಕರ ದಟ್ಟಣೆ ಸರಿದೂಗಿಸಲು ಭೂವನೇಶ್ವರ-ಬೆಳಗಾವಿ ನಿಲ್ದಾಣಗಳ ನಡುವೆ ಸಾಪ್ತಾಯಿಕ ವಿಶೇಷ ರೈಲು ಓಡಿಸಲಾಗುತ್ತದೆ ಎಂದು ಪೂರ್ವ ಕರಾವಳಿ ರೈಲು ಇಲಾಖೆ ತಿಳಿಸಿದೆ.

೮. ರಾಮನಗರ ಜಿಲ್ಲೆಯ ಚೆನ್ನಪಟ್ಟಣ, ಮಾಗಡಿ, ಕನಕಪುರ ಹಾಗೂ ಹಾರೋಹಳ್ಳಿ, ತಹಶೀಲ್ದಾರ್ ಕಚೇರಿಯಲ್ಲಿ ನಾಳೆ ಬೆಳಗ್ಗೆ ೧೧ ರಿಂದ ೧೨ರವರೆಗೆ ಸಾರ್ವಜನಿಕ ರಸ್ತೆ ಒತ್ತುವರಿ ಸಮಸ್ಯೆ ಕುರಿತು ಅಹವಾಲು ಸ್ವೀಕರಿಸಲು ಅದಾಲತ್ ಹಮ್ಮಿಕೊಳ್ಳಲಾಗಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**